ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**23.07.2025 / 1.10pm**
**<><*<><>*><>**

ಮುಖ್ಯಾಂಶಗಳು

೧. ಸಂಸತ್ ಅಧಿವೇಶನದಲ್ಲಿ ಮುಂದುವರೆದ ಗದ್ದಲ-ಕೋಲಾಹಲ; ಸಲ್ಪಕಾಲ ಸದನ ಮುಂದೂಡಿಕೆ

೨. ಪ್ರಧಾನಿ ನರೇಂದ್ರ ಮೋದಿ ಅವರ ಎರಡು ರಾಷ್ಟ್ರಗಳ ಪ್ರವಾಸ; ಲಂಡನ್‌ನಲ್ಲಿ ವ್ಯಾಪಕ ಸಿದ್ಧತೆ

೩. ೨೦೨೮ರ ವೇಳೆಗೆ ಭಾರತ ಜಾಗತಿಕವಾಗಿ ಮೂರನೇ ಅತಿದೊಡ್ಡ ಆರ್ಥಿಕ ಬೆಳವಣಿಗೆಯ ರಾಷ್ಟ್ರವಾಗಲಿದೆ- ಮಾರ್ಗನ್ ಸ್ಟ್ಯಾನ್ಲಿ ವರದಿ

೪. ಮ್ಯಾಂಚೆಸ್ಟರ್‌ನ ಓಲ್ಡ್ ಟ್ರಾಫರ್ಡ್‌ನಲ್ಲಿ ಇಂದಿನಿಂದ ನಾಲ್ಕನೇ ಟೆಸ್ಟ್ ಕ್ರಿಕೆಟ್; ಭಾರತ - ಇಂಗ್ಲೆಂಡ್ ಮುಖಾಮುಖಿ

><><><><><><><><><><><

ಸಂಸತ್ ಅಧಿವೇಶನದಲ್ಲಿ ವಿವಿಧ ವಿಷಯಗಳಿಗೆ ಸಂಬಂಧಿಸಿದಂತೆ ಗದ್ದಲ-ಕೋಲಾಹಲ ಮುಂದುವರೆದ ಹಿನ್ನಲೆಯಲ್ಲಿ ಉಭಯ ಸದನಗಳ ಕಲಾಪವನ್ನು ಸ್ವಲ್ಪ ಕಾಲ ಮುಂದೂಡಲಾಯಿತು. ಇಂದು ಬೆಳಗ್ಗೆ ನಿಗದಿತ ಸಮಯಕ್ಕೆ ಲೋಕಸಭೆ ಸಮಾವೇಶಗೊಂಡಾಗ ಸಭಾಧ್ಯಕ್ಷ ಓಂ ಬಿರ್ಲಾ, ಪ್ರಶ್ನೋತ್ತರ ಕಲಾಪವನ್ನು ಕೈಗೆತ್ತಿಕೊಂಡರು. ಆಗ ವಿಪಕ್ಷ ಸದಸ್ಯರು, ಬಿಹಾರದಲ್ಲಿ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ ಕುರಿತು ಚರ್ಚೆಗೆ ಅವಕಾಶ ಕಲ್ಪಿಸಬೇಕು ಎಂದು ಒತ್ತಾಯಿಸಿದರು. ಆಗ ಸಭಾಧ್ಯಕ್ಷರು ಆಕ್ಷೇಪ ವ್ಯಕ್ತಪಡಿಸಿ, ಮೊದಲು ಪ್ರಶ್ನೋತ್ತರ ಕಲಾಪ ನಡೆಸಲು ಅವಕಾಶ ಕಲ್ಪಿಸಬೇಕು. ದೇಶದ ಜನ ಸದನದ ಕಾರ್ಯಕಲಾಪವನ್ನು ಸೂಕ್ಷ್ಮವಾಗಿ ಗಮನಿಸುತ್ತಿದ್ದಾರೆ. ಸದನದಲ್ಲಿ ಭಿತ್ತಿ ಚಿತ್ರಗಳನ್ನು ಪ್ರದರ್ಶಿಸಿ, ಘೋಷಣೆ ಕೂಗುವುದು ತರವಲ್ಲ ಎಂದರು. ಈ ಹಂತದಲ್ಲಿ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರು, ಬಿಹಾರದ ರೈಲ್ವೆ ಯೋಜನೆಗಳಿಗೆ ಸಂಬಂಧಿಸಿದ ಪ್ರಶ್ನೆಗೆ ಉತ್ತರಿಸಿ, ಈ ರಾಜ್ಯಕ್ಕೆ ಕಳೆದ ಹನ್ನೊಂದು ವರ್ಷಗಳಲ್ಲಿ ೯ ಪಟ್ಟು ರೈಲ್ವೆ ಅನುದಾನವನ್ನು ಹೆಚ್ಚಿಸಲಾಗಿದೆ. ಒಂದು ಸಾವಿರದ ೧೩೨ ಕೋಟಿ ರೂಪಾಯಿಯಿಂದ ೧೦ ಸಾವಿರ ಕೋಟಿ ರೂಪಾಯಿಗೆ ಅನುದಾನ ವೃದ್ಧಿಸಿದೆ. ಹಲವಾರು ವರ್ಷಗಳಿಂದ ನೆನಗುದಿಗೆ ಬಿದ್ದಿದ್ದ ಯೋಜನೆಗಳನ್ನು ಪೂರ್ಣಗೊಳಿಸಲಾಗಿದೆ. ೧೯ ರೈಲ್ವೆ ನಿಲ್ದಾಣಗಳ ಅಭಿವೃದ್ಧಿ ಕಾಮಗಾರಿ ಪ್ರಗತಿಯಲ್ಲಿದೆ. ೮ 'ವಂದೇ ಭಾರತ್' ಹಾಗೂ ಐದು ಅಮೃತ್ ಭಾರತ್ ರೈಲುಗಳು ಬಿಹಾರದಲ್ಲಿ ಸಂಚರಿಸುತ್ತಿವೆ ಎಂದು ಹೇಳಿದರು. ಆಗ ವಿಪಕ್ಷ ಸದಸ್ಯರು ಘೋಷಣೆ ಕೂಗುವುದನ್ನು ತೀವ್ರಗೊಳಿಸಿದಾಗ ಸಭಾಧ್ಯಕ್ಷರು ಕಲಾಪವನ್ನು ಮಧ್ಯಾಹ್ನ ೧೨ ಗಂಟೆಗೆ ಮುಂದೂಡಿದರು. ರಾಜ್ಯಸಭೆಯಲ್ಲೂ ಇದೇ ವಿಷಯಕ್ಕೆ ಸಂಬಂಧಿಸಿದಂತೆ ಚರ್ಚೆಗೆ ಒತ್ತಾಯಿಸಿದಾಗ, ಉಪಸಭಾಪತಿ ಹರಿವಂಶ್ ಅವರು, ಈ ಬೇಡಿಕೆಯನ್ನು ತಿರಸ್ಕರಿಸಿದರು. ಕಾಂಗ್ರೆಸ್, ಟಿಎಂಸಿ, ಡಿಎಂಕೆ ಮತ್ತಿತರ ಪಕ್ಷಗಳು ಸದನದಲ್ಲಿ ಗದ್ದಲವೆಬ್ಬಿಸಿದವು. ಆಗ ಕಲಾಪವನ್ನು ಮಧ್ಯಾಹ್ನ ೧೨ಗಂಟೆಗೆ

ಮುಂದೂಡಿದರು. ನಂತರ ಸದನ ಮತ್ತೆ ಸೇರಿದಾಗಲೂ ಗಲಾಟೆ ಮುಂದುವರೆಯಿತು. ಆಗ ಕಲಾಪವನ್ನು ಮಧ್ಯಾಹ್ನ ೨ ಗಂಟೆಗೆ ಮುಂದೂಡಲಾಯಿತು.

><><><><><><><><><><><

ಪ್ರಧಾನಿ ನರೇಂದ್ರ ಮೋದಿ ಇಂದಿನಿಂದ ಬ್ರಿಟನ್ ಹಾಗೂ ಮಾಲ್ಡೀವ್ಸ್‌ಗೆ ಅಧಿಕೃತ ಪ್ರವಾಸ ಕೈಗೊಳ್ಳಲಿದ್ದಾರೆ. ತಮ್ಮ ಭೇಟಿಯ ಮೊದಲ ಚರಣದಲ್ಲಿ ಪ್ರಧಾನಿ, ಬ್ರಿಟನ್‌ಗೆ ಭೇಟಿ ನೀಡಲಿದ್ದು, ಅಲ್ಲಿನ ಪ್ರಧಾನಿ ಕೀರ್ ಸ್ಟಾರ್ಮರ್ ಅವರೊಂದಿಗೆ ದ್ವಿಪಕ್ಷೀಯ ಸಭೆ ನಡೆಸಲಿದ್ದಾರೆ. ಬ್ರಿಟನ್ ದೊರೆ ಮೂರನೇ ಚಾರ್ಲ್ಸ್ ಅವರನ್ನು ಭೇಟಿ ಮಾಡಲಿದ್ದಾರೆ. ಪ್ರಧಾನಿಯವರ ಪ್ರವಾಸದ ಕುರಿತು ಮಾಧ್ಯಮಗಳಿಗೆ ಮಾಹಿತಿ ನೀಡಿದ ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ, ಪ್ರಧಾನಿ ನರೇಂದ್ರ ಮೋದಿ ಅವರು ಬ್ರಿಟನ್ ಮತ್ತು ಭಾರತದ ಉದ್ಯಮ ನಾಯಕರೊಂದಿಗೆ ಸಂವಾದ ನಡೆಸಲಿದ್ದಾರೆ ಎಂದರು. ಬ್ರಿಟನ್‌ಗೆ ಪ್ರಧಾನಿ ಕೈಗೊಳ್ಳುತ್ತಿರುವ ನಾಲ್ಕನೇ ಭೇಟಿ ಇದಾಗಿದೆ. ಉಭಯ ನಾಯಕರೊಂದಿಗಿನ ಸಭೆಗಳು ಪ್ರಧಾನಿಯವರಿಗೆ ಭಾರತ-ಬ್ರಿಟನ್ ನಡುವಿನ ದ್ವಿಪಕ್ಷೀಯ ಸಂಬಂಧಗಳು ಹಾಗೂ ಅದನ್ನು ಬಲಪಡಿಸುವ ಕುರಿತಂತೆ ಪರಿಶೀಲನೆ ನಡೆಸಲು ಅವಕಾಶ ಕಲ್ಪಿಸುತ್ತದೆ. ಈ ಸಭೆಗಳ ವೇಳೆ ಪ್ರಧಾನಿ, ಪರಸ್ಪರ ಹಿತಾಸಕ್ತಿಯ ಪ್ರಾದೇಶಿಕ ಹಾಗೂ ಜಾಗತಿಕ ಸವಾಲುಗಳ ಕುರಿತು ಅಭಿಪ್ರಾಯ ವಿನಿಮಯ ಮಾಡಿಕೊಳ್ಳಲಿದ್ದಾರೆ ಎಂದರು. ೨೦೨೧ರಲ್ಲಿ ಭಾರತ-ಬ್ರಿಟನ್ ಪಾಲುದಾರಿಕೆಯನ್ನು, ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯಾಗಿ ಉನ್ನತೀಕರಿಸಲಾಗಿದ್ದು, ಈ ಸಂಬಂಧವನ್ನು ಮತ್ತಷ್ಟು ಬಲಪಡಿಸಲು ಉಭಯ ದೇಶಗಳು ಬದ್ಧವಾಗಿವೆ, ಎಂದು ವಿಕ್ರಮ್ ಮಿಸ್ರಿ ಮಾಹಿತಿ ನೀಡಿದರು. ತಮ್ಮ ಪ್ರವಾಸದ ಎರಡನೇ ಚರಣದಲ್ಲಿ ಪ್ರಧಾನಿ, ಇದೇ ೨೫ ರಿಂದ ಮಾಲ್ಡೀವ್ಸ್‌ಗೆ ಭೇಟಿ ನೀಡಲಿದ್ದಾರೆ. ಮಾಲ್ಡೀವ್ಸ್ ಅಧ್ಯಕ್ಷ ಮೊಹಮ್ಮದ್ ಮುಯಿಝು ಅವರ ಆಹ್ವಾನ ಮೇರೆಗೆ ಇದೇ ೨೬ರಂದು ನಡೆಯಲಿರುವ ಮಾಲ್ಡೀವ್ಸ್‌ನ ೬೦ನೇ ಸ್ವಾತಂತ್ರ್ಯೋತ್ಸವ ವರ್ಷಾಚರಣೆಯಲ್ಲಿ ಗೌರವ ಅತಿಥಿಯಾಗಿ ಪಾಲ್ಗೊಳ್ಳಲಿದ್ದಾರೆ. ಭೇಟಿಯ ವೇಳೆ ಪ್ರಧಾನಿ, ಅಧ್ಯಕ್ಷ ಮುಯಿಝು ಅವರೊಂದಿಗೆ ದ್ವಿಪಕ್ಷೀಯ ಸಭೆ ನಡೆಸಲಿದ್ದು, ವಿವಿಧ ಮೂಲಸೌಕರ್ಯ ಯೋಜನೆಗಳನ್ನು ಉದ್ಘಾಟಿಸಲಿದ್ದಾರೆ ಎಂದು ವಿಕ್ರಮ್ ಮಿಸ್ರಿ ತಿಳಿಸಿದ್ದಾರೆ.

><><><><><><><><><><><

ಪ್ರಧಾನಿ ನರೇಂದ್ರ ಮೋದಿ ಅವರ ಬ್ರಿಟನ್ ಪ್ರವಾಸ ಅತ್ಯಂತ ಮಹತ್ವ ಪಡೆದುಕೊಂಡಿದ್ದು, ಉಭಯ ದೇಶಗಳ ನಡುವೆ ಹೂಡಿಕೆ, ವ್ಯಾಪಾರ ಮತ್ತು ಆರ್ಥಿಕ ಸಂಬಂಧ ಬಲವರ್ಧನೆಗೆ ಸಹಕಾರಿಯಾಗಲಿದೆ ಎಂದು ಬ್ರಿಟನ್‌ನಲ್ಲಿನ ಭಾರತದ ರಾಯಭಾರಿ ವಿಕ್ರಮ್ ದೊರೈಸ್ವಾಮಿ ಹೇಳಿದ್ದಾರೆ. ಪ್ರಧಾನಿ ಪ್ರವಾಸದ ಹಿನ್ನೆಲೆಯಲ್ಲಿ ಐ.ಎ.ಎನ್.ಎಸ್ ಸುದ್ದಿಸಂಸ್ಥೆಯೊಂದಿಗೆ ಮಾತನಾಡಿದ ಅವರು, ಉಭಯ ದೇಶಗಳು ಭಾರತ-ಬ್ರಿಟನ್ ಮುಕ್ತ ವ್ಯಾಪಾರ ಒಡಂಬಡಿಕೆಯನ್ನು ಮತ್ತೊಂದು ಹಂತಕ್ಕೆ ಕೊಂಡೊಯ್ಯಲು ಹಾಗೂ ಈ ವಲಯದಲ್ಲಿ ದ್ವಿಪಕ್ಷೀಯ ಬಾಂಧವ್ಯ ಬಲವರ್ಧನೆಗೆ ಆದ್ಯತೆ ನೀಡುವ ನಿಟ್ಟಿನಲ್ಲಿ ಕಾರ್ಯೋನ್ಮುಖವಾಗಿವೆ. ಭಾರತದ ಸಂಪೂರ್ಣ ತಂಡ, ಲಂಡನ್‌ನಲ್ಲಿ ಪ್ರಧಾನಿ ಭೇಟಿಯನ್ನು ಯಶಸ್ವಿಗೊಳಿಸಲು ಕಾರ್ಯಪ್ರವೃತವಾಗಿವೆ ಎಂದು ಹೇಳಿದರು. ಎರಡೂ ದೇಶಗಳ ನಡುವೆ ಆರ್ಥಿಕ ಕ್ಷೇತ್ರದ ಸಂಬಂಧ ವೃದ್ಧಿಗೆ ಪ್ರಯತ್ನಗಳು ನಡೆಯುತ್ತಿವೆ. ಬ್ರಿಟನ್ ಪ್ರಧಾನಿ ಕೀರ್ ಸ್ಟಾರ್ಮರ್ ಅವರ ಆಹ್ವಾನದ ಮೇರೆಗೆ ಪ್ರಧಾನಿ ನರೇಂದ್ರ ಮೋದಿ ಅವರು ಬ್ರಿಟನ್ ಪ್ರವಾಸ ಕೈಗೊಂಡಿದ್ದಾರೆ ಎಂದರು.

ಧ್ವನಿ: ವಿಕ್ರಮ್ ದೊರೈಸ್ವಾಮಿ ( ೧೮ ಸೆಕೆಂಡ್ಸ್)

><><><><><><><><><><><

ಪ್ರಮುಖ ಆರ್ಥಿಕ ಬೆಳವಣಿಗೆ ರಾಷ್ಟ್ರಗಳ ಪೈಕಿ, ಭಾರತ ಅತ್ಯಂತ ತ್ವರಿತ ಪ್ರಗತಿ ಸಾಧಿಸುತ್ತಿದೆ ಎಂದು ಏಷ್ಯಾ ಅಭಿವೃದ್ಧಿ ಬ್ಯಾಂಕ್ ವರದಿ ತಿಳಿಸಿದೆ. ಪ್ರಸಕ್ತ ವರ್ಷ ದೇಶದ ಜಿಡಿಪಿ ಬೆಳವಣಿಗೆ, ಶೇಕಡ ೬.೫ ರಷ್ಟು ಹಾಗೂ ೨೦೨೬ ರ ಸಾಲಿನಲ್ಲಿ ಶೇಕಡಾ ೬.೭ ರಷ್ಟು ದಾಖಲಾಗುವ ನಿರೀಕ್ಷೆಯಿದೆ ಎಂದು ವರದಿ ತಿಳಿಸಿದೆ. ದೇಶೀಯವಾಗಿ ಬಲಿಷ್ಠ ಬೇಡಿಕೆ, ಸಾಮಾನ್ಯ ಮುಂಗಾರು ಮತ್ತು ವಿತ್ತೀಯ ಚಟುವಟಿಕೆ ಸುಗಮಗೊಂಡಿರುವ ಹಿನ್ನೆಲೆಯಲ್ಲಿ ಜಿಡಿಪಿ ಬೆಳವಣಿಗೆಯಾಗಲಿದೆ ಎಂದು ಹೇಳಿದೆ. ಈ ಮಧ್ಯೆ, ೨೦೨೮ರ ವೇಳೆಗೆ ಭಾರತ ಜಾಗತಿಕವಾಗಿ ೩ನೇ ಅತೀ ದೊಡ್ಡ ಆರ್ಥಿಕತೆಯಾಗಲಿದೆ ಹಾಗೂ ೨೦೩೫ರ ವೇಳೆಗೆ ೧೦.೬ ಟ್ರಿಲಿಯನ್ ಡಾಲರ್ ತಲುಪಲಿದೆ ಎಂದು ಮೊರ್ಗನ್ ಸ್ಟ್ಯಾನಿ  ವರದಿ ತಿಳಿಸಿದೆ.

><><><><><><><><><><><

ಇಂದು, 'ರಾಷ್ಟ್ರೀಯ ಪ್ರಸಾರ ದಿನ'. 'ಬಹುಜನ ಹಿತಾಯ, ಬಹುಜನ ಸುಖಾಯ' ಎಂಬ ಧ್ಯೇಯದೊಂದಿಗೆ, ಆಕಾಶವಾಣಿ ಜುಲೈ ೨೩ನ್ನು, ರಾಷ್ಟ್ರೀಯ ಪ್ರಸಾರ ದಿನವನ್ನಾಗಿ ಆಚರಿಸುತ್ತದೆ. ಸುದ್ದಿ, ಮಾಹಿತಿ, ಮನೋರಂಜನೆಯೊಂದಿಗೆ, ಸಮಷ್ಟಿ ಹಿತದ ಕಾಯಕದಲ್ಲಿ ಆಕಾಶವಾಣಿ ತೊಡಗಿದೆ. ಸಾರ್ವಜನಿಕ ಹಿತದ ರಾಷ್ಟ್ರೀಯ ಪ್ರಸಾರ ಮಾಧ್ಯಮವಾಗಿದೆ. ಭಾರತದಲ್ಲಿ ಮೊಟ್ಟ ಮೊದಲ ಬಾರಿಗೆ, ೧೯೨೩ ರ ಜೂನ್‌ನಲ್ಲಿ, ಬಾಂಬೆ ರೇಡಿಯೋ ಕ್ಲಬ್‌ನಿಂದ, ಪ್ರಥಮ ಬಾನುಲಿ ಪ್ರಸಾರ ಸೇವೆ, ಪ್ರಾರಂಭವಾಯಿತು. ತರುವಾಯ ೧೯೨೭ರ ಜುಲೈ ೨೩ ರಂದು, ಇಂಡಿಯನ್ ಬ್ರಾಡ್‌ಕಾಸ್ಟಿಂಗ್ ಕಾರ್ಪೋರೇಷನ್  ಸ್ಥಾಪನೆಯಾಯಿತು. ೮ನೇ ಜೂನ್, ೧೯೩೬ರಲ್ಲಿ ಆಲ್ ಇಂಡಿಯಾ ರೇಡಿಯೋ ಆಕಾಶವಾಣಿ, ಪ್ರಸಾರ ಸೇವೆ ಆರಂಭಿಸಿ, ಇದೀಗ ಸಾರ್ಥಕ ೯೦ ವರ್ಷಗಳು. ರಾಷ್ಟ್ರೀಯ ಪ್ರಸಾರ ದಿನದ ಅಂಗವಾಗಿ ಆಕಾಶವಾಣಿ ಅರ್ಥಪೂರ್ಣವಾಗಿ, ವಿಶೇಷ ಕಾರ್ಯಕ್ರಮಗಳೊಂದಿಗೆ, ಇಂದು ಸಂಭ್ರಮದಿಂದ ಆಚರಿಸುತ್ತಿದೆ.

><><><><><><><><><><><

ಮ್ಯಾಂಚೆಸ್ಟರ್‌ನ ಓಲ್ಡ್ ಟ್ರಾಫರ್ಡ್‌ನಲ್ಲಿ ಇಂದಿನಿಂದ ನಾಲ್ಕನೇ ಟೆಸ್ಟ್ ಕ್ರಿಕೆಟ್ ಪಂದ್ಯದಲ್ಲಿ ಭಾರತ ಮತ್ತು ಇಂಗ್ಲೆಂಡ್ ತಂಡಗಳು ಮುಖಾಮುಖಿಯಾಗಲಿವೆ. ಐದು ಪಂದ್ಯಗಳ ಟೆಸ್ಟ್ ಸರಣಿಯಲ್ಲಿ ಭಾರತ ೧-೨ ಅಂತರದಿಂದ ಹಿನ್ನಡೆಯಲ್ಲಿದೆ. ಪಂದ್ಯ ಭಾರತೀಯ ಕಾಲಮಾನ ಮಧ್ಯಾಹ್ನ ೩:೩೦ ಕ್ಕೆ ಆರಂಭವಾಗಲಿದೆ. ಈ ಪಂದ್ಯ ಗೆದ್ದು ಸರಣಿ ಸಮಬಲ ಸಾಧಿಸಲು ಭಾರತ ತಂಡದ ಆಟಗಾರರು ಕಠಿಣ ತಾಲೀಮು ನಡೆಸುತ್ತಿದ್ದಾರೆ.

><><><><><><><><><><><